ಜನವರಿ-2022

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

## "IEC Progress Review"

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಬರುವ ವಿವಿಧ ಯೋಜನೆಗಳ ಐ.ಇ.ಸಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ದಿನಾಂಕ 27, ಜನವರಿ 2022 ರಂದು ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ನೇತೃತ್ವದಲ್ಲಿ ಇಲಾಖೆಯ ಸಮಗ್ರ ಐ.ಇ.ಸಿ ಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಾಯಿತು. ಸಭೆಯಲ್ಲಿ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಇಲಾಖೆ, ಆಯುಕ್ತರು, ಗ್ರಾಮೀಣಾಭಿವೃದ್ಧಿ ಸೇರಿದಂತೆ ಇಲಾಖೆಯ ಇತರೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದು, ಸಚಿವರಿಗೆ ತಮ್ಮ ತಮ್ಮ ಇಲಾಖೆಗಳಡಿ ಮಾಡಲಾಗುತ್ತಿರುವ ಐ.ಇ.ಸಿ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.




## ತರಬೇತಿ ಕಾರ್ಯಕ್ರಮಗಳು

### "ಜಲ ಜೀವನ್ ಮಿಷನ್ ಯೋಜನೆ ಕುರಿತ ಕಾರ್ಯಾಗಾರ"



ಗ್ರಾಮೀಣ ಪ್ರದೇಶದ ಪ್ರತಿಯೊಂದು ಕುಟುಂಬಕ್ಕೆ **ಕಾರ್ಯಾತ್ಮಕ ನಳ ಸಂಪರ್ಕ** ಕಲ್ಪಿಸುವ ಮೂಲಕ ತಲಾ 55 ಲೀಟರ್ ಶುದ್ಧ ಸುರಕ್ಷಿತ ನೀರನ್ನು ಒದಗಿಸುವ ಮೂಲ ಉದ್ದೇಶದಿಂದ ದೇಶಾದ್ಯಂತ **ಜಲ ಜೀವನ್ ಮಿಷನ್** ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರಾಜ್ಯದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಈ ಯೋಜನೆಯನ್ನು ಅನುಷ್ಠಾನ ಮಾಡುತ್ತಿದ್ದು, ಈ ಸಂಬಂಧ ಗ್ರಾಮೀಣ ಕರ್ನಾಟಕದ ಜನರಿಗೆ ಯೋಜನೆಯ ಬಗ್ಗೆ ಮಾಹಿತಿ ನೀಡುವ ಸಲುವಾಗಿ ಅನುಷ್ಠಾನ ನೆರವು ಸಂಸ್ಥೆಗಳನ್ನು(ISA) ಇಲಾಖೆಯಡಿ ಜಿಲ್ಲೆಗಳಲ್ಲಿ ನೇಮಕ ಮಾಡಿಕೊಳ್ಳಲಾಗಿದೆ. ಅನುಷ್ಠಾನ ನೆರವು ಸಂಸ್ಥೆಗಳು ಕಾರ್ಯಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಎಲ್ಲಾ ಜಿಲ್ಲೆಗಳಲ್ಲಿ ಇಲಾಖೆಯಡಿ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳನ್ನು (DPM) ನೇಮಿಸಿಕೊಳ್ಳಲಾಗಿದೆ.

ಮುಂದುವರೆದು ಹೀಗೆ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲಾ ಯೋಜನಾ ವ್ಯವಸ್ಥಾಪಕರು ಮತ್ತು ಅನುಷ್ಠಾನ ನೆರವು ಸಂಸ್ಥೆಗಳಿಗೆ ಯೋಜನೆಯ ಬಗ್ಗೆ ಕಾಲ ಕಾಲಕ್ಕೆ ತರಬೇತಿ ಅಗತ್ಯವಿದ್ದು, ಎಲ್ಲಾ ಜಿಲ್ಲೆಗಳ DPM & ISA ಸಿಬ್ಬಂದಿಗೆ 4 ಬ್ಯಾಚ್‌ಗಳಲ್ಲಿ, ಗದಗ ಮತ್ತು ಉಡುಪಿ ಜಿಲ್ಲೆಗಳಲ್ಲಿ ತರಬೇತಿ ನೀಡಲಾಯಿತು.





ಈ ನಾಲ್ಕು ಬ್ಯಾಚ್‌ಗಳ ತರಬೇತಿ ಕಾರ್ಯಾಗಾರವನ್ನು ಕ್ರಮವಾಗಿ ಗದಗ ಹಾಗೂ ಉಡುಪಿ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಕಾರ್ಯನಿರ್ವಾಹಕ ಅಭಿಯಂತರರು ಉದ್ಘಾಟಿಸಿದರು ಹಾಗೂ ರಾಜ್ಯ ಕಚೇರಿಯ UNICEF ಸಮಾಲೋಚಕರು, ಹಾಗೂ IEC, HRD ಸಮಾಲೋಚಕರುಗಳು ಸೇರಿದಂತೆ Document Specialist ಹಾಗೂ ವಿಷಯ ತಜ್ಞರುಗಳು ಶಿಬಿರಾರ್ಥಿಗಳಿಗೆ ತರಬೇತಿ ನೀಡಿದರು.

### "ಸ್ವಯಂ ಸೇವಾ ಸಂಸ್ಥೆಯಿಂದ VWSC ಸದಸ್ಯರಿಗೆ ತರಬೇತಿ"



**ಜಲ ಜೀವನ ಮಿಷನ್** ಯೋಜನೆಯ ಧ್ಯೇಯೋದ್ದೇಶ ಗ್ರಾಮೀಣ ಪ್ರದೇಶದ ಎಲ್ಲಾ ಮನೆಗಳಿಗೆ ಕಾರ್ಯಾತ್ಮಕ ನಳದ ಮೂಲಕ ನೀರು ಸರಬರಾಜು ಮಾಡುವುದು ಹಾಗೂ ಮುಂದಿನ ದಿನಗಳಲ್ಲಿ ಗ್ರಾಮೀಣ ಕುಡಿಯುವ ನೀರಿನ ವ್ಯವಸ್ಥೆಯನ್ನು ಆಯಾಯ ಗ್ರಾಮಗಳ **"ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ"**ಯೇ ನಿರ್ವಹಿಸಲು ಸಮಿತಿಯನ್ನು ಸಶಕ್ತರನ್ನಾಗಿ ಮಾಡುವುದಾಗಿದೆ. ಈ ನಿಟ್ಟಿನಲ್ಲಿ ಭಾರತ ಸರ್ಕಾರವು ಕರ್ನಾಟಕ ರಾಜ್ಯದಲ್ಲಿ 11 ಸ್ವಯಂ ಸೇವಾ ಸಂಸ್ಥೆಗಳನ್ನು ಆಯ್ಕೆ ಮಾಡಿದ್ದು, ಈ ಪೈಕಿ ಜನಕಲ್ಯಾಣ ಸಂಸ್ಥೆಯೂ ಒಂದಾಗಿದೆ. ಈ ಸಂಸ್ಥೆಯು ರಾಯಚೂರು ಜಿಲ್ಲೆಯ 15 ಗ್ರಾಮ ಪಂಚಾಯಿತಿಗಳ 60 ಗ್ರಾಮಗಳ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಸದಸ್ಯರಿಗೆ ದಿನಾಂಕ: 17.01.2022 ರಿಂದ 20.01.2022 ರವರೆಗೆ 4 ದಿನಗಳ ಕಾಲ ತರಬೇತಿಯನ್ನು ನೀಡಲಾಯಿತು. ರಾಜ್ಯದಲ್ಲಿ ಸ್ವಯಂ ಸೇವಾ ಸಂಸ್ಥೆಯು ಆಯೋಜಿಸಿದ್ದ ಮೊದಲ ತರಬೇತಿ ಕಾರ್ಯಾಗಾರ ಇದಾಗಿದ್ದು, ಮೊದಲ ಕಾರ್ಯಾಗಾರವನ್ನು ಸಿಂಧನೂರು ತಾಲೂಕು ಕಾರ್ಯನಿರ್ವಾಹಕ ಅಧಿಕಾರಿ ಉದ್ಘಾಟಿಸಿದರು. ತರಬೇತಿ ಕಾರ್ಯಾಗಾರದಲ್ಲಿ ಜನಕಲ್ಯಾಣ ಸ್ವಯಂ ಸೇವಾ ಸಂಸ್ಥೆಯ ಅಧ್ಯಕ್ಷರು ಮತ್ತು ವಿಷಯ ತಜ್ಞರುಗಳು ಶಿಬಿರಾರ್ಥಿಗಳಿಗೆ ತರಬೇತಿ ನೀಡಿದರು. ಈ ತರಬೇತಿ ಕಾರ್ಯಾಗಾರದಲ್ಲಿ 58ಕ್ಕೂ ಹೆಚ್ಚು ಮಂದಿ ತರಬೇತಿ ಪಡೆದರು.



